ಹೆಚ್ಚಿಸಲು ಜಾರಿ ಮತ್ತು ತನಿಖೆ ಕಾರ್ಯವನ್ನು ಚುರುಕುಗೊಳಿಸುವ ದಿಸೆಯಲ್ಲಿ ಇಲಾಖೆಯನ್ನು ಪುನರ್‌ರಚಿಸಿ ಸಿಬ್ಬಂದಿಯನ್ನು ಮರುವಿನ್ಯಾಸಗೊಳಿಸಲಾಗಿದೆ.

4808 (5412) ಶ್ರೀ ಕಟ್ಟಾ ಸುಬ್ರಹ್ಮಣ್ಯನಾಯ್ಡು (ಶಿವಾಜಿನಗರ): ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಹಸೀಲ್ದಾರ್ ಹುದ್ದೆಗಳಿಗೆ ನೇರವಾಗಿ ಕೆ.ಎ.ಎಸ್. ಪರೀಕ್ಷೆ ನಡೆಸಿ ಸರ್ಕಾರದಿಂದಲೇ ನೇರ ನೇಮಕಾತಿ ಮಾಡಿಕೊಳ್ಳಲು ನಿರ್ಧರಿಸಲಾಗಿದೆಯೇ;

ಆ) ಹಾಗಿದ್ದಲ್ಲಿ ಎಷ್ಟು ಹುದ್ದೆಗಳನ್ನು ಈ ರೀತಿ ಸರ್ಕಾರದಿಂದಲೇ ನೇರ ನೇಮಕಾತಿ ಮಾಡಿಕೊಳ್ಳಲಾಗುವುದು;

ಇ) ಸೇವೆಯಲ್ಲಿರತಕ್ಕ ನೌಕರರಿಗೆ ಹುದ್ದೆಗಳನ್ನು ಮೀಸಲಾಗಿಡಲಾಗಿದೆಯೇ;

ಈ) ಈ ನೇಮಕಾತಿಗಳನ್ನು ಕರ್ನಾಟಕ ಲೋಕಸೇವಾ ಆಯೋಗದ ವ್ಯಾಪ್ತಿಯಿಂದ ಕೈಬಿಡಲು ಕಾರಣಗಳೇನು;

ಉ) ಈ ಹುದ್ದೆಗಳನ್ನು ಪಾರದರ್ಶಕವಾಗಿ ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ಎಂ.ಪಿ.ಪ್ರಕಾಶ್ (ಕಂದಾಯ ಸಚಿವರು):

ಅ) ಹೌದು.

ಆ) 111

ಇ) ಇಲ್ಲ.

ಈ) ಇಲ್ಲಿಯವರೆಗೆ ಕರ್ನಾಟಕ ಲೋಕಸೇವಾ ಆಯೋಗದ ಮುಖಾಂತರ ನೇಮಕಾತಿ ಆಗುತ್ತಿತ್ತು. ವಿಳಂಬವಾಗಿರುವುದರಿಂದ, ಸರ್ಕಾರ ನೇರ ನೇಮಕಾತಿಯ ಬಗ್ಗೆ ಕ್ರಮ ಕೈಗೊಳ್ಳಲಾಗುತ್ತಿದೆ.

ಉ) ಸರ್ಕಾರವು ವಿಶೇಷ ನೇಮಕಾತಿ ನಿಯಮಗಳನ್ನು ಅಂತಿಮವಾಗಿ ಪ್ರಕಟಿಸಿದ ನಂತರ ಆಯ್ಕೆ ಪ್ರಾಧಿಕಾರ ಮೂಲಕ ಸ್ಪರ್ಧಾತ್ಮಕ ಪರೀಕ್ಷೆ (ಲಿಖಿತ ಹಾಗೂ ಮೌಖಿಕ) ನಡೆಸಿ ಅಭ್ಯರ್ಥಿಗಳು ಗಳಿಸುವ ಅಂಕಗಳ ಅರ್ಹತೆ ಆಧಾರದ ಮೇಲೆ ಆಯ್ಕೆ ಮಾಡಲು ಸೂಕ್ತ ಕ್ರಮ ಕೈಗೊಳ್ಳಲಾಗುವುದು.